ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೦೩ನೇ ಜುಲೈ, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು
೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ವೇತನ ತಾರತಮ್ಯ ಸರಿದೂಗಿಸುವ ಶ್ರೀ ಕುಮಾರ್ ನಾಯಕ್ ವರದಿ ಜಾರಿ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೬೧ (೬೮೦+೫೭೯+೬೩೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರೌಢಶಾಲಾ ಸಹ ಶಿಕ್ಷಕರು, ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಹಾಗೂ ಪ್ರಾಂಶುಪಾಲರ ವೇತನ ತಾರತಮ್ಯ ಸರಿದೂಗಿಸಲು ಇಲಾಖಾ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಕುಮಾರ್ ನಾಯ್ಕ್‌ರವರಿಂದ ಸರ್ಕಾರ ವರದಿ ಪಡೆಯಲಾಗಿತ್ತೇ ;

(ಆ) ಸದರಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಯಾವಾಗ ; ಈ ವರದಿಯಲ್ಲಿ ನೀಡಿದ ಪ್ರಮುಖ ಶಿಫಾರಸ್ಸುಗಳಾವುವು ; (ವಿವರ ನೀಡುವುದು ಹಾಗೂ ವರದಿಯ ಪ್ರತಿ ಒದಗಿಸುವುದು)

(ಇ) ಈ ವರದಿಯನ್ನು ಜಾರಿಗೆ ತರುವುದಾಗಿ ದಿನಾಂಕ: ೧೫.೦೪.೨೦೧೫ರ ಸಭೆಯಲ್ಲಿ ಸರ್ಕಾರವು ಭರವಸೆ ನೀಡಿದೆಯೇ ;

(ಈ) ಹಾಗಾದರೆ, ಈ ವರದಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ವೇತನ ತಾರತಮ್ಯ ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದು ?

## ಉಪನ್ಯಾಸಕರ ಬೋಧನಾ ಅವಧಿ ವಿಸ್ತರಿಸುವ ಕುರಿತು

**ಪ್ರೊ: ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) –**

೬೨ (೬೭೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉನ್ನತ ಶಿಕ್ಷಣ ಇಲಾಖೆಯ ಖಾಯಂ ಪೂರ್ಣಾವದಿ ಉಪನ್ಯಾಸಕರ ಬೋಧನಾ ಅವಧಿಯನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿರುವುದು ನಿಜವೇ;

(ಆ) ಪ್ರಸ್ತುತ ಉಪನ್ಯಾಸಕರಿಗಿರುವ ಬೋಧನಾ ಅವಧಿಯ ಪ್ರಮಾಣ ಎಷ್ಟು ; ಈ ಅವಧಿಯನ್ನು ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲು ಯೋಚಿಸಲಾಗಿದೆ ; (ವಿವರ ನೀಡುವುದು)

(ಇ) ಸಾಧಕ–ಬಾಧಕಗಳ ಕುರಿತು ಶಿಕ್ಷಣ ತಜ್ಞರೊಂದಿಗೆ ಹಾಗೂ ಶಿಕ್ಷಕ ಸಂಘದೊಂದಿಗೆ ಸಮಾಲೋಚನೆ ನಡೆಸಿದೆಯೇ ; ಇದರಿಂದ ಶಿಕ್ಷಣ ಗುಣಮಟ್ಟದ ಮೇಲೆ ಆಗುವ ಪರಿಣಾಮಗಳೇನು ; ಈ ಬಗ್ಗೆ ಸರ್ಕಾರ ಗಂಭೀರವಾದ ಚಿಂತನೆ ಮಾಡಿದೆಯೇ ;

(ಈ) ಶೈಕ್ಷಣಿಕ ಗುಣಮಟ್ಟದ ಮೇಲೆ ನಿಷೇಧಾತ್ಮಕ ಪರಿಣಾಮ ಬೀರುವ ಇಂತಹ ಕ್ರಮ ಕೈಗೊಳ್ಳಲು ಕಾರಣವೇನು ?

## ಸಂಬಳ ವಿತರಣಾ ಪದ್ಧತಿಯ ಸರಳೀಕರಣ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೩ (೫೮೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರಿಗೆ ತಿಂಗಳಿನ ಮೊದನೇ ದಿನಾಂಕದಂದು ಸಂಬಳ ನೀಡಲಾಗುತ್ತಿದೆಯೇ ;

(ಆ) ಇಲ್ಲದಿದ್ದರೆ, ಸಂಬಳ ವಿತರಣಾ ಪದ್ಧತಿಯನ್ನು ಸರಳೀಕರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿಥಿಲಾವಸ್ಥೆಯಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪ (೩೩೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ನೀರು ಪೂರೈಸುವ ಓವರ್ ಹೆಡ್ ಟ್ಯಾಂಕ್‌ಗಳು ಎಷ್ಟು ಕಡೆ ಶಿಥಿಲಾವಸ್ಥೆಯಲ್ಲಿರುವುದನ್ನು ಸರ್ಕಾರ ಗುರುತಿಸಿದೆ;

(ಆ) ಗುರುತಿಸಿದ್ದಲ್ಲಿ, ಅವುಗಳ ವಿವರ ನೀಡುವುದು ;

(ಇ) ಶಿಥಿಲಾವಸ್ಥೆಯಲ್ಲಿರುವ ಓವರ್ ಹೆಡ್ ಟ್ಯಾಂಕ್‌ಗಳ ಬದಲಾಗಿ ಹೊಸದಾದ ಟ್ಯಾಂಕ್ ನಿರ್ಮಾಣಕ್ಕೆ ಸರ್ಕಾರ ಯೋಜನೆಯನ್ನು ರೂಪಿಸಿದೆಯೇ ?

## ವಸತಿರಹಿತ ಬಡವರಿಗೆ ವಸತಿ ನಿರ್ಮಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೬೫ (೬೬೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮಹಾನಗರ ಮತ್ತು ಇತರೆ ಮಹಾನಗರಗಳಲ್ಲಿ ವಸತಿ ರಹಿತ ಬಡ ಕುಟುಂಬಗಳಿಗೆ ವಸತಿ ಯೋಜನೆ ಜಾರಿಯಲ್ಲಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಸ್ತಿತ್ವದಲ್ಲಿರುವ ಯೋಜನೆಗಳು ಯಾವುವು ; ಸದರಿ ಯೋಜನೆ ಅಡಿಯಲ್ಲಿ ಬಡವರು ಮನೆಗಳನ್ನು ಪಡೆಯಲು ಇರುವ ಮಾನದಂಡಗಳೇನು;

(ಇ) ಕಳೆದ ೩ ವರ್ಷದಲ್ಲಿ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು ; ವಿಲೇವಾರಿ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ? (ವಿವರ ಯೋಜನಾವಾರು ಒದಗಿಸುವುದು)

## ಪ್ರಾಥಮಿಕ ಶಾಲಾ ಶಿಕ್ಷಕರಿಗೆ, ಶಿಕ್ಷಣ ನೀಡುವುದರ ಜೊತೆಗೆ ಇರುವ ಹೆಚ್ಚುವರಿ ಜವಾಬ್ದಾರಿಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೬ (೫೮೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ, ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಇತರೆ ಯಾವ ರೀತಿಯ ಜವಾಬ್ದಾರಿಗಳನ್ನು ನೀಡಲಾಗಿದೆ ಮತ್ತು ಮುಂದೆ ನೀಡಲಾಗುವುದು ;

(ಆ) ಶಿಕ್ಷಕರಿಗೆ ನೀಡುವ ಜವಾಬ್ದಾರಿಗಳಲ್ಲಿ ಬೇರೆ ಇಲಾಖೆಯಿಂದ ನೀಡಲಾಗುವ ಜವಾಬ್ದಾರಿಗಳು ಯಾವುವು ಇದರ ಜೊತೆಗೆ ಅನಿರೀಕ್ಷಿತವಾಗಿ ಬರಬಹುದಾದ ಹೆಚ್ಚುವರಿ ಜವಾಬ್ದಾರಿಗಳು ಯಾವುವು ;

(ಇ) ಶಿಕ್ಷಣ ಇಲಾಖೆಯು ಶಿಕ್ಷಕರಿಗೆ ನೀಡುವ ತರಬೇತಿಗಳು ಯಾವುವು ; ಎಲ್ಲ ರೀತಿಯ ಅವಶ್ಯಕ ತರಬೇತಿಗಳನ್ನು ಪಡೆಯಲು ಒಬ್ಬ ಶಿಕ್ಷಕರಿಗೆ ತಗಲುವ ಕಾಲಾವಧಿ ಏನು ;

(ಈ) ಸೆಪ್ಟೆಂಬರ್–೨೦೧೫ ರೊಳಗೆ ಶೇಕಡಾ ೫೦ ರಷ್ಟು ಸಿಲೆಬಸ್ ಬೋಧನೆ ಮಾಡಿರಬೇಕೆನ್ನುವ ನಿಯಮವಿರುವುದು ನಿಜವೇ ;

(ಉ) ಹೆಚ್ಚುವರಿ ಜವಾಬ್ದಾರಿಗಳನ್ನು ನಿಭಾಯಿಸಿಕೊಂಡು ನಿಗಧಿತ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ಬೋಧನೆ ಮಾಡುವುದು ಶಿಕ್ಷಕರಿಗೆ ಸಾಧ್ಯವೆ ;

(ಊ) ಶಿಕ್ಷಕರ ಮೇಲಿನ ಇತರೆ ಹೆಚ್ಚುವರಿ ಹೊರೆಗಳನ್ನು ಇಳಿಸಲು ಇಲಾಖೆಯು ಯಾವ ರೀತಿಯ ಪ್ರಯತ್ನ ನಡೆಸಿದೆ ; ಸಪ್ಟೆಂಬರ್ ತಿಂಗಳೊಳಗೆ ಶೇಕಡಾ ೫೦ ರಷ್ಟು ಬೋಧನೆ ಮಾಡಬೇಕೆನ್ನುವ ನಿಯಮ ಸಡಿಲಿಸಲು ಇಲಾಖೆಯು ಮುಂದಾಗುವುದೇ ?

## ಶಿಕ್ಷಕರ ಕೊರತೆಯನ್ನು ನೀಗಿಸುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೭ (೬೬೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ – ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕೊರತೆಯಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವಳಿ ಜಿಲ್ಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ಎಸ್.ಎಸ್.ಎಲ್.ಸಿ. ಫಲಿತಾಂಶದ ಮೇಲೆ ಪರಿಣಾಮ ಬೀರಿದೆಯೇ ;

(ಇ) ಬೀರಿದ್ದರೆ, ಶಿಕ್ಷಕರ ಕೊರತೆಯನ್ನು ನೀಗಿಸಲು ಸರಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮೀಣ ಕೃಪಾಂಕದಡಿ ನೇಮಕಗೊಂಡು, ವಜಾಗೊಂಡ ಶಿಕ್ಷಕರುಗಳಿಗೆ ವಿಶೇಷ ನೇಮಕಾತಿಯಲ್ಲಿ ಮರುನೇಮಕಾತಿ ಹೊಂದಿದ ದಿನಾಂಕದಿಂದ ವೇತನ ನಿಗದಿಪಡಿಸುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೬೮ (೨೦೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೯೭ ರಿಂದ ೧೯೯೯ರ ಅವಧಿಯಲ್ಲಿ ಗ್ರಾಮೀಣ ಕೃಪಾಂಕದಡಿಯಲ್ಲಿ ನೇಮಕಾತಿಗೊಂಡು ನ್ಯಾಯಾಲಯದ ಆದೇಶದಂತೆ ವಜಾಗೊಂಡ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನ್ಯಾಯಾಲಯದ ಆದೇಶದಂತೆ ವಜಾಗೊಂಡ ಶಿಕ್ಷಕರುಗಳ ಪೈಕಿ ೨೦೦೩ರ ಪರಿಷ್ಕೃತ ಪಟ್ಟಿಯಲ್ಲಿ ಸ್ಥಾನ ಪಡೆದ (ಗ್ರಾಮೀಣ ಕೃಪಾಂಕ) ಶಿಕ್ಷಕರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಜಾಗೊಂಡ ಶಿಕ್ಷಕರುಗಳ ಪೈಕಿ ಪರಿಷ್ಕೃತ ಪಟ್ಟಿಯಲ್ಲಿ ಸ್ಥಾನ ಪಡೆಯದ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಮಾಹಿತಿ ನೀಡುವುದು)

(ಈ) ಪರಿಷ್ಕೃತ ಪಟ್ಟಿಯಲ್ಲಿ ಸ್ಥಾನ ಪಡೆಯದ ಶಿಕ್ಷಕರುಗಳ ಪೈಕಿ ವಿಶೇಷ ನೇಮಕಾತಿ–೨೦೦೩ರಲ್ಲಿ ನೇಮಕಾತಿ ಹೊಂದಿದ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪರಿಷ್ಕೃತ ಪಟ್ಟಿಯಲ್ಲಿ ಸ್ಥಾನ ಪಡೆಯದ ಶಿಕ್ಷಕರುಗಳ ಪೈಕಿ ವಿಶೇಷ ನೇಮಕಾತಿಯಲ್ಲಿ ೨೦೦೫ರಲ್ಲಿ ನೇಮಕಾತಿ ಹೊಂದಿದ ಶಿಕ್ಷಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ೨೦೦೩ ಮತ್ತು ೨೦೦೫ರ ವಿಶೇಷ ನೇಮಕಾತಿಯಲ್ಲಿ ನೇಮಕಾತಿ ಹೊಂದಿದ ಶಿಕ್ಷಕರುಗಳಿಗೆ ಕೆಲವೊಂದು ಜಿಲ್ಲೆಗಳಲ್ಲಿ ಕೃಪಾಂಕ ಸಹಿತ ನೇಮಕಾತಿ ಹೊಂದಿದ (೧೯೯೭, ೧೯೯೯) ದಿನಾಂಕದಿಂದ ವೇತನ ನಿಗಧಿಪಡಿಸಿದ್ದು, ಮತ್ತೇ ಕೆಲವೊಂದು ಜಿಲ್ಲೆಗಳಲ್ಲಿ ವಿಶೇಷ ನೇಮಕಾತಿ ಹೊಂದಿದ (೨೦೦೫) ದಿನಾಂಕದಿಂದ ವೇತನ ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ವೇತನ ನಿಗಧಿಪಡಿಸಿರುವುದು ಸರಿಯೇ ; ಇದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕಾಯ್ದೆ ಉಲಂಘಿಸುತ್ತಿರುವ ಕಾಲೇಜುಗಳ ಮಾನ್ಯತೆ ರದ್ದು ಮಾಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯ (೩೪೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಪದವಿ ಪೂರ್ವ ಶಿಕ್ಷಣ ಕಾಲೇಜುಗಳೆಷ್ಟು ; ಇವುಗಳ ಪೈಕಿ ಶಿಕ್ಷಣ ಕಾಯ್ದೆ ನಿಯಮಗಳನ್ನು ಪಾಲಿಸಿರುವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪದವಿ ಪೂರ್ವ ಶಿಕ್ಷಣ ಕಾಲೇಜುಗಳಿಗೆ ಅನುಮತಿ ನೀಡಲು ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಗಳ ರೀತ್ಯಾ ಇರಬೇಕಾದ ಮೂಲಭೂತ ಸೌಕರ್ಯಗಳಾವುವು ;

(ಇ) ರಾಜ್ಯದಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸದಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ರಾಜ್ಯ ಉಚ್ಚ ನ್ಯಾಯಾಲಯದ ಆದೇಶದ ರೀತ್ಯ ಕೈಗೊಂಡಿರುವ ಕ್ರಮಗಳೇನು ?

## ಯೋಗ ಶಿಕ್ಷಣವನ್ನು ಕಡ್ಡಾಯಗೊಳಿಸುವ ಬಗ್ಗೆ

**ಶ್ರೀ ಸಿ.ಎಚ್. ವಿಜಯಶಂಕರ್ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦ (೧೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳ ಹಂತಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಶಾಲಾ ಮಕ್ಕಳ ಮಾನಸಿಕ ಏಕಾಗ್ರತೆ ಹಾಗೂ ದೈಹಿಕ ಬಲಸಂವರ್ಧನೆಯ ದೃಷ್ಟಿಯಿಂದ ಇಲಾಖೆ ಈವರೆವಿಗೂ ಕೈಗೊಂಡಿರುವ ವ್ಯವಸ್ಥಿತ ಕ್ರಮಗಳೇನು ;

(ಆ) ಈ ನಿಟ್ಟಿನಲ್ಲಿ ಇಲಾಖಾ ಶಾಲಾ ಶಿಕ್ಷಣ ವ್ಯವಸ್ಥೆಯಲ್ಲಿ ಯೋಗ ಶಿಕ್ಷಣವನ್ನು ಕಡ್ಡಾಯವಾಗಿ ಕಲಿಸಲು ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ ಪೂರಕ ಮಾಹಿತಿಗಳನ್ನು ಒದಗಿಸುವುದು ?

## ಹೊಸ ಗ್ರಾಮ ಪಂಚಾಯತ್‌ಗಳಿಗೆ ಮೂಲಸೌಕರ್ಯ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧ (೫೬೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಈಗಿರುವ ಒಟ್ಟು ಗ್ರಾಮ ಪಂಚಾಯತ್‌ಗಳು ಎಷ್ಟು ; ಅವುಗಳಲ್ಲಿ ಹೊಸದಾಗಿ ಸೃಜಿಸಿರುವ ಗ್ರಾಮ ಪಂಚಾಯತ್‌ಗಳು ಎಷ್ಟು ; (ಅವು ಯಾವುವು)

(ಆ) ಯಾವ ಯಾವ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ರಚನೆಯಾದ ಗ್ರಾಮ ಪಂಚಾಯತ್‌ಗಳಿಗೆ ಮೂಲ ಸೌಕರ್ಯ ಕಲ್ಪಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಸಂಬಂಧ ಬಿಡುಗಡೆ ಗೊಳಿಸಿರುವ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯತ್‌ಗಳಿಗೆ ತುರ್ತಾಗಿ ಕಛೇರಿ ಕಟ್ಟಡ ಮತ್ತು ಸಿಬ್ಬಂದಿ ಒದಗಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಅನುದಾನಿತ ಸಂಸ್ಥೆಗಳಲ್ಲಿ ಜೇಷ್ಠತೆಯನ್ನು ಪರಿಗಣಿಸದೆ ಇರುವುದು

**ಶ್ರೀ ರಘನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೨ (೩೩೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಸಂಸ್ಥೆಯಲ್ಲಿ ಸಿಬ್ಬಂದಿಗಳ ಜೇಷ್ಠತೆಯ ಪಟ್ಟಿ ಹೇಗೆ ಪರಿಗಣಿಸಲಾಗುತ್ತಿದೆ ;

(ಆ) ಅನುದಾನಿತ ಸಂಸ್ಥೆಯಲ್ಲಿ ಇಬ್ಬರು ಸೇವೆಗೆ ಸೇರಿದ ದಿನಾಂಕ ಒಂದೇ ಆಗಿದ್ದರೆ ಯಾವ ರೀತಿ ಜೇಷ್ಠತೆಯ ಪಟ್ಟಿ ಪರಿಗಣಿಸಲಾಗುವುದು ; (ವಿವರ ಒದಗಿಸುವುದು)

(ಇ) ಜೇಷ್ಠತೆಯಲ್ಲಿ ಸೇವೆಗೆ ಸೇರಿದ ದಿನಾಂಕ ಒಂದೇ ಆಗಿದ್ದಲ್ಲಿ, ಸರ್ಕಾರದಿಂದ ವೇತನಾನುದಾನಕ್ಕೆ ಒಳಪಡಿಸಿದ ದಿನಾಂಕ ಬೇರೆ ಬೇರೆ ಆಗಿದ್ದಲ್ಲಿ ಜೇಷ್ಠತೆಯನ್ನು ಹೇಗೆ ಪರಿಗಣಿಸಲಾಗುವುದು ;

(ಈ) ಮೀಸಲಾತಿ ಎರಡು ಹುದ್ದೆಯಲ್ಲಿ ಸಾಮಾನ್ಯ ಅಭ್ಯರ್ಥಿಯನ್ನು ನೇಮಕ ಮಾಡಿಕೊಂಡಲ್ಲಿ ಇವರ ಜೊತೆ ಪರಿಶಿಷ್ಠ ಪಂಗಡ ಅಭ್ಯರ್ಥಿಯ ಜೊತೆ ಜೇಷ್ಠತೆಯಲ್ಲಿ ಹೊಂದಾಣಿಕೆ ಮಾಡಬಹುದೆ ; (ವಿವರ ನೀಡುವುದು)

(ಉ) ಅನುದಾನಿತ ಸಂಸ್ಥೆಯಲ್ಲಿ ನಿರಂತರವಾಗಿ ಸರ್ಕಾರದಿಂದ ೧೫ ವರ್ಷಗಳಿಂದ ವೇತನ ಪಡೆಯುತ್ತಿದ್ದು ಏಕಾಏಕಿ ಅವರನ್ನು ವೇತನಾನುದಾನದಿಂದ ಕೈಬಿಡಬಹುದೆ ; (ಮಾಹಿತಿಯ ವಿವರ ನೀಡುವುದು)

(ಊ) ಅನುದಾನಿತ ಸಂಸ್ಥೆಯಲ್ಲಿನ ಸಿಬ್ಬಂದಿಯನ್ನು ಪರಿಶಿಷ್ಟ ಪಂಗಡದ ಅಭ್ಯರ್ಥಿಯ ಜೊತೆ / ಸಾಮಾನ್ಯ ಅಭ್ಯರ್ಥಿ ಅಂಕಗಳ ಹೊಂದಾಣಿಕೆ ಮಾಡಿ ಜೇಷ್ಠತೆ ಪರಿಗಣಿಸಬಹುದೇ ; ಪರಿಗಣಿಸಿದ್ದಲ್ಲಿ, ಅಂತಹ ಪ್ರಕರಣಗಳ ಸಂಪೂರ್ಣ ವಿವರ ನೀಡುವುದು ?

## ಬೆಳಗಾವಿ ವಿಭಾಗದಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೭೩ (೬೩೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ವಿಭಾಗದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳು ಎಷ್ಟು ; ಅವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ವಿಭಾಗದ ಅಂಗನವಾಡಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ ೨ ವರ್ಷದಿಂದ ಹೊಸ ಅಂಗನವಾಡಿ ಕಟ್ಟಡಗಳನ್ನು ಎಲ್ಲೆಲ್ಲಿ ನಿರ್ಮಾಣ ಮಾಡಲಾಗುತ್ತಿದೆ ? (ವಿವರ ನೀಡುವುದು)

## ಮಂಗಳೂರು ಸೆಂಟ್ರಲ್ ರೈಲು ನಿಲ್ದಾಣವನ್ನು ಅಂತರರಾಷ್ಟ್ರೀಯ ರೈಲು ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೭೪ (೬೭೨) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಗಳೂರು ಸೆಂಟ್ರಲ್ ರೈಲು ನಿಲ್ದಾಣವನ್ನು ಅಂತರರಾಷ್ಟ್ರೀಯ ರೈಲು ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸುವ ಯೋಜನೆ ಬಜೆಟ್‌ನಲ್ಲಿ ಘೋಷಿಸಿ ೪ ವರ್ಷಗಳಾದರೂ ಕಾರ್ಯಗತಗೊಳ್ಳದೇ ಇರಲು ಕಾರಣಗಳೇನು ; ಈ ಯೋಜನೆ ಯಾವ ಹಂತದಲ್ಲಿದೆ ; ಈ ಬಗ್ಗೆ ರೈಲ್ವೆ ಇಲಾಖೆಯು ಕೈಗೊಂಡ ಕ್ರಮಗಳೇನು ;

(ಆ) ಮಂಗಳೂರು ರೈಲ್ವೆ ನಿಲ್ದಾಣದಲ್ಲಿ ಎಸ್ಕಲೇಟರ್ ಮತ್ತು ಲಿಫ್ಟ್ ವ್ಯವಸ್ಥೆ ಅಳವಡಿಸದೇ ಇರಲು ಕಾರಣಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೈಲ್ವೆಗಳ ಅಭಿವೃದ್ಧಿಗೆ ಇಲಾಖೆ ಮುಂದಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಈ) ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರದ ಅಡ್ಯಾರು, ಕೆಮ್ಮಂಜೂರು ಬಳಿ ಕೆಳಸೇತುವೆ ನಿರ್ಮಾಣಕ್ಕೆ ರಾಜ್ಯ ಸರ್ಕಾರಕ್ಕೆ ಅನುದಾನ ನೀಡಲು ಪ್ರಸ್ತಾವನೆ ಸಲ್ಲಿಸಿದ್ದರೂ, ಅನುದಾನ ಬಿಡುಗಡೆಗೊಳಿಸಲು ವಿಳಂಬ ನೀತಿ ಅನುಸರಿಸುತ್ತಿರಲು ಕಾರಣವೇನು ; ಸರ್ಕಾರ ಎಂದು ಬಿಡುಗಡೆಗೊಳಿಸಲಾಗುವುದು ?

## ಪದವಿಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫ (೯೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಉಪನ್ಯಾಸಕರಿಗೆ ಮತ್ತು ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸ್ವಂತ ಕಟ್ಟಡ, ಶೌಚಾಲಯ, ಆಟದ ಮೈದಾನ, ಪ್ರಯೋಗ ಶಾಲೆ, ವಿದ್ಯಾರ್ಥಿಗಳಿಗೆ ಅನುಗುಣವಾಗಿ ಉಪನ್ಯಾಸಕರು ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಹೊಂದಿದ ಮತ್ತು ಹೊಂದಿರದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಮೂಲಭೂತ ಸೌಲಭ್ಯಗಳನ್ನು ಹೊಂದದೆ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಯಾವ ಕಾಲಮಿತಿಯಲ್ಲಿ ಸೌಲಭ್ಯಗಳನ್ನು ಒದಗಿಸುವುದು?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. , ಪ್ರತಿಗಳು 1500